ಅರ್ಜಿಗಳನ್ನು ಸಲ್ಲಿಸಿ ಗೌರವಧನ ಮಂಜೂರು ಮಾಡಬೇಕೆಂದು ಒತ್ತಾಯಿಸುತ್ತಿದ್ದುದರಿಂದ ಗೋವಾ ವಿಮೋಚನಾ ಚಳುವಳಿಗಾರರಿಗೆ ಗೌರವಧನ ಮಂಜೂರು ಮಾಡುವ ಯೋಜನೆಯನ್ನು 19-4-95 ರಿಂದ ರದ್ದುಗೊಳಿಸಿದೆ.

ಇ) ಇಲ್ಲ.

ವಿಷಯ: ಪುತ್ತೂರು ಗ್ರಾಮಾಂತರ ಪೋಲೀಸ್ ಠಾಣೆ ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1627 ( 1855)

ಶ್ರೀ ಡಿ.ವಿ.ಸದಾನಂದಗೌಡ (ಪುತ್ತೂರು):- ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಕೃತ ಪುತ್ತೂರು ಗ್ರಾಮಾಂತರ ಪೋಲೀಸ್ ಠಾಣೆಯು ಸದ್ರಿ ಪೋಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ಒಂದು ಬದಿಯಲ್ಲಿದ್ದು ಇದನ್ನು ಈ ಗ್ರಾಮಗಳ ಕೇಂದ್ರಸ್ಥಾನವಾದ ''ಕುಂಬ್ರ'' ಎಂಬಲ್ಲಿಗೆ ಸ್ಥಳಾಂತರಿಸುವ ಪ್ರಸ್ತಾವನೆ ಸರಕಾರದ ಮುಂದಿದೆಯೇ?

ಆ) ಇದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಪಿ.ಜಿ.ಆರ್. ಸಿಂಧ್ಯ (ಗೃಹ ಸಚಿವರು):-

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ: ತುಂಗಾಭದ್ರ ಅಣೆಕಟ್ಟಿನ ಹೂಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1629 ( 1812)

ಶ್ರೀ ಸಂಗಣ್ಣ ಕರಡಿ (ಕೊಪ್ಪಳ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗಭದ್ರಾ ಅಣೆಕಟ್ಟಿನಲ್ಲಿ ಶೇಖರಣೆಗೊಂಡಿರುವ ಹೂಳಿನ ಪ್ರಮಾಣ ಎಷ್ಟು?

ಆ) ಈ ಹೂಳನ್ನು ತೆಗೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಇ) ಈ ಹೂಳನ್ನು ತೆಗೆಯಲು ಖರ್ಚಾಗುವ ಹಣವೆಷ್ಟು?

ಶ್ರೀ ಹೆಚ್.ಡಿ.ದೇವೇಗೌಡ (ಮುಖ್ಯಮಂತ್ರಿಗಳು):-

ಅ) ತುಂಗಭದ್ರಾ ಅಣೆಕಟ್ಟಿನಲ್ಲಿ 1993ರ ಸೆಡಿಮೆಂಟೇಶನ್ ಸರ್ವೆ ಪ್ರಕಾರ ಸುಮಾರು 20.97 ಟಿ.ಎಮ್.ಸಿ.ಯಷ್ಟು ಹೂಳು ತುಂಬಿರುತ್ತದೆ.

ಆ) ಯಾವುದೇ ಕ್ರಮವನ್ನು ತೆಗೆದುಕೊಂಡಿರುವುದಿಲ್ಲ.

ಇ) ಸುಮಾರು ರೂ. 2000.00 ಕೋಟಿಗಳೆಂದು ಅಂದಾಜಿಸಲಾಗಿದೆ.

ವಿಷಯ: ಹಿರೇಹಳ್ಳ ನೀರಾವರಿ ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1630 ( 1829)

ಶ್ರೀ ಸಂಗಣ್ಣ ಕರಡಿ (ಕೊಪ್ಪಳ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?